ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 12-07-2017

## ಪತ್ರಿಕಾ ಆಮಂತ್ರಣ

**1. ಪತ್ರಿಕಾಗೋಷ್ಠಿ:**

**ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆ ಫಲಿತಾಂಶ ಕುರಿತು.**

**ತನ್ವೀರ್ ಸೇಠ್,**
**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು**

**ದಿನಾಂಕ: 13-07-2017, ಗುರುವಾರ, ಸಮಯ: 11-00 ಗಂಟೆಗೆ**
**ಸ್ಥಳ: ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು**

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪುನರ್‌ರಚನೆ ಸಮಿತಿ ವರದಿ ಸಲ್ಲಿಕೆ

ಬೆಂಗಳೂರು, ಜುಲೈ 12 (ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪ್ರಸ್ತುತ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು ಮತ್ತಷ್ಟು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಹಾಗೂ ಯೋಜನೆಗಳ ವಿವರಗಳನ್ನು ಜನರಿಗೆ ಮನದಟ್ಟು ಮಾಡಲು ಅಗತ್ಯವಿರುವ ಸಕಲ ಸೌಕರ್ಯಗಳನ್ನು ಒದಗಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಇಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪುನರ್‌ರಚನೆ ಸಮಿತಿ ಸಲ್ಲಿಸಿದ ವರದಿಯನ್ನು ಸ್ವೀಕರಿಸಿ ಮಾತನಾಡಿದ ಅವರು ಇತರೆ ರಾಜ್ಯಗಳಿಗೆ ಹೋಲಿಸಿದಲ್ಲಿ ಕರ್ನಾಟಕದಲ್ಲಿ ವಾರ್ತಾ ಇಲಾಖೆಯ ಅನುದಾನ ಕಡಿಮೆ ಇದೆ ಎನ್ನುವ ಮಾಹಿತಿ ತಮಗೆ

ತಿಳಿದಿದ್ದು, ಇಲಾಖೆಗೆ ಕಳೆದ ವರ್ಷದಿಂದ ಹೆಚ್ಚಿನ ಅನುದಾನವನ್ನು ನೀಡಲಾಗುತ್ತಿದೆ. ಅಧಿಕಾರಿಗಳು ತಮ್ಮ ಅಗತ್ಯತೆಯ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದಲ್ಲಿ ಮತ್ತಷ್ಟು ಅನುದಾನ ನೀಡುವ ಬಗ್ಗೆ ಪರಿಶೀಲಿಸಲಾಗುವುದು ಎಂದರು.

ಸಮಿತಿ ಸಲ್ಲಿಸಿರುವ ವರದಿಯನ್ನು ಸರ್ಕಾರ ಪರಿಶೀಲಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿಗಳು ಈ ಸಂದರ್ಭದಲ್ಲಿ ತಿಳಿಸಿದರು.

ವರದಿಯನ್ನು ಸಲ್ಲಿಸಿ ಮಾತನಾಡಿದ ಸಮಿತಿಯ ಅಧ್ಯಕ್ಷ ಎಂ.ಆರ್. ಶ್ರೀನಿವಾಸಮೂರ್ತಿ ಅವರು ಸಮಿತಿಯು ಲಭ್ಯ ಮಾನವ ಸಂಪನ್ಮೂಲದಲ್ಲಿ ಇಂದಿನ ತಾಂತ್ರಿಕತೆಯನ್ನು ಬಳಸಿಕೊಂಡು ಅತ್ಯಂತ ಪರಿಣಾಮಕಾರಿಯಾಗಿ ಇಲಾಖೆ ಕಾರ್ಯನಿರ್ವಹಿಸುವ ಬಗ್ಗೆ ಹೆಚ್ಚಿನ ಒತ್ತು ನೀಡಲಾಗಿದೆ. ಈಗಾಗಲೇ ಇಲಾಖೆ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಅತ್ಯಂತ ಉತ್ತಮ ಸಿಬ್ಬಂದಿಗಳು ಇಲಾಖೆಯಲ್ಲಿದ್ದು ಇನ್ನಷ್ಟು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಸಲಹೆಗಳನ್ನು ನೀಡಲಾಗಿದೆ.

ಕೇಂದ್ರ ಸರ್ಕಾರದ ಪಿ.ಐ.ಬಿ. ಮಾದರಿಯಲ್ಲಿ ಸರ್ಕಾರದ ಪ್ರತಿ ಇಲಾಖೆಯ ಕಾರ್ಯಗಳ ಕುರಿತು ಜಿಲ್ಲಾವಾರು ಕಚೇರಿಗಳು ಜಿಲ್ಲಾ ಮಟ್ಟದಲ್ಲಿ ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯ ನಡೆಯುವ ಅಗತ್ಯತೆ ಇದೆ.

ಪ್ರಸ್ತುತ ಇಲಾಖೆಯು ಮುದ್ರಣ ಮಾಧ್ಯಮದಲ್ಲಿ ಪ್ರಚಾರದ ಹೆಚ್ಚಿನ ಒತ್ತನ್ನು ನೀಡುತ್ತಿದ್ದು, ಇದನ್ನು ದೂರದರ್ಶನ ವಾಹಿನಿಗಳಿಗು ಮತ್ತು ಹೊಸ ಮಾಧ್ಯಮಗಳಿಗೂ ವಿಸ್ತರಿಸುವ ಅಗತ್ಯವಿದೆ. ಈ ರೀತಿಯ ಹಲವು ಅಂಶಗಳ ಬಗ್ಗೆ ಸಮಿತಿ ಹೆಚ್ಚಿನ ಒತ್ತನ್ನು ನೀಡಿದ್ದು ವರದಿಯು 120 ಪುಟ ಹಾಗೂ 10 ಅಧ್ಯಾಯಗಳಿಂದ ಕೂಡಿದೆ ಎಂದು ತಿಳಿಸಿದರು.

ದೆಹಲಿಯಲ್ಲಿ ರಾಜ್ಯದ ಪತ್ರಕರ್ತರುಗಳ ಸಂಖ್ಯೆ ಇತ್ತೀಚಿನ ವರ್ಷಗಳಲ್ಲಿ ಹೆಚ್ಚಾಗಿದ್ದು ಅದಕ್ಕೆ ಹೊಸದಾಗಿ ಕನ್ನಡದಲ್ಲಿ ಪ್ರಾರಂಭಗೊಂಡಿರುವ ಮಾಧ್ಯಮ ಸಂಸ್ಥೆಗಳು ತಮ್ಮ ಪ್ರತಿನಿಧಿಯನ್ನು ರಾಷ್ಟ್ರಮಟ್ಟದಲ್ಲಿ ರಾಜ್ಯದ ಸುದ್ದಿಗಳನ್ನು ನೋಡಿಕೊಳ್ಳಲು ಅಗತ್ಯವಿರುವ ಕಾರಣಕ್ಕೆ ದೆಹಲಿಯಲ್ಲಿ ಕರ್ನಾಟಕ ಮಾಧ್ಯಮ ಕೇಂದ್ರವನ್ನು ಸ್ಥಾಪಿಸಲು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪುನರ್‌ರಚನಾ ಸಮಿತಿಯ ಅಧ್ಯಕ್ಷ ಎಂ. ಆರ್. ಶ್ರೀನಿವಾಸಮೂರ್ತಿ ಅವರು ಮುಖ್ಯಮಂತ್ರಿಗಳ ಗಮನಕ್ಕೆ ತಂದರು.

ಈ ಸಂದರ್ಭದಲ್ಲಿ ಸಮಿತಿಯ ಸದಸ್ಯರುಗಳಾದ ಡಾ. ಎಸ್. ಕೃಷ್ಣಮೂರ್ತಿ, ಹಿರಿಯ ಪತ್ರಕರ್ತ ರಾಜಾ ಶೈಲೇಶ್‌ಚಂದ್ರ ಗುಪ್ತ, ಪತ್ರಕರ್ತ ಇಸ್ಮಾಯಿಲ್, ವಾರ್ತಾ ಮತ್ತು

ಸಾರ್ವಜನಿಕ ಸಂಪರ್ಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಎಂ. ಲಕ್ಷ್ಮೀನಾರಾಯಣ, ನಿರ್ದೇಶಕ ಎನ್. ಆರ್. ವಿಶುಕುಮಾರ್, ಜಂಟಿ ನಿರ್ದೇಶಕರಾದ ಹೆಚ್. ಬಿ. ದಿನೇಶ್ ಹಾಗೂ ಎ. ಆರ್. ಪ್ರಕಾಶ್ ಅವರು ಉಪಸ್ಥಿತರಿದ್ದರು.

ಎಸ್‌ಎಂ:ಜೆಡಿ:ಜಿಪಿಆರ್.

(ಛಾಯಾಚಿತ್ರ ಲಗತ್ತಿಸಿದೆ)

## ರಾಜ್ಯದಲ್ಲಿ ಯಾವ ಕ್ಷೇತ್ರಕ್ಕೂ ತೊಂದರೆಯಾಗದಂತೆ ವಿದ್ಯುತ್ ಪೂರೈಕೆಗೆ ಕ್ರಮ

**— ಸಚಿವ ಡಿ.ಕೆ. ಶಿವಕುಮಾರ್**

ಬೆಂಗಳೂರು, ಜುಲೈ 12 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಮಳೆ ಕೊರತೆಯಿಂದ ವಿದ್ಯುತ್ ಉತ್ಪಾದನೆ ಕಡಿಮೆಯಾಗುತ್ತಿದ್ದರೂ ರೈತರು, ಕೈಗಾರಿಕೆಗಳು ಹಾಗೂ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ವಿದ್ಯುತ್ ಸರಬರಾಜು ಮಾಡಲು ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ ಎಂದು ಇಂಧನ ಸಚಿವ  ಡಿ. ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನಸೌಧದ, ತಮ್ಮ ಕಚೇರಿಯಲ್ಲಿ ಇಂದು ಬ್ರಿಟಿಷ್ ಡೆಪ್ಯೂಟಿ ಹೈ ಕಮೀಷನರ್ 'ಡಾಮನಿಕ್ ಮ್ಯಾಕ್‌ಅಲಿಸ್ಟರ್' ಅವರನ್ನು ಭೇಟಿ ಮಾಡಿದ ನಂತರ ಪತ್ರಕರ್ತರೊಂದಿಗೆ ಮಾತನಾಡಿದ ಇಂಧನ ಸಚಿವರು ಸಧ್ಯ ದಿನನಿತ್ಯದ ವಿದ್ಯುತ್ ಬೇಡಿಕೆ 8300 ಮೆ.ವ್ಯಾಟ್ ನಿಂದ 9300 ಮೆ. ವ್ಯಾಟ್‌ವರೆಗೆ ಇದೆ, ಮಳೆ ಕೊರತೆಯಿಂದಾಗಿ ಜಲಾಶಯಗಳಲ್ಲಿನ ನೀರಿನ ಸಂಗ್ರಹ ಪ್ರಮಾಣ ಕಳೆದ ವರ್ಷಕ್ಕೆ ಹೋಲಿಸಿದಲ್ಲಿ ಕಡಿಮೆ ಇದೆ ಆದರೂ ಯಾರಿಗೂ ತೊಂದರೆಯಾಗದ ಹಾಗೆ ವಿದ್ಯುತ್ ಪೂರೈಕೆ ಮಾಡಲು ಸೂಕ್ತ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಪ್ರಸ್ಥುತ ಹಾಗೂ ಮುಂದಿನ ದಿನಗಳಲ್ಲಿನ ವಿದ್ಯುತ್ ಪರಿಸ್ಥಿತಿ ಬಗ್ಗೆ ಚರ್ಚಿಸಲು ಇಂದು ಮುಖ್ಯಮಂತ್ರಿ ಅವರ ಅಧ್ಯಕ್ಷತೆಯಲ್ಲಿ ಸಭೆ ಏರ್ಪಡಿಸಲಾಗಿದೆ, ಛತ್ತೀಸ್‌ಘಡ್‌ನ ನಮ್ಮ ರಾಜ್ಯದ ಶಾಖೋತ್ಪನ್ನ ವಿದ್ಯುತ್ ಉತ್ಪಾದನಾ ಘಟಕಕ್ಕೆ ಕಲ್ಲಿದ್ದಲು ನಿಕ್ಷೇಪವನ್ನು ಹಂಚಿಕೆ ಮಾಡುವುದಾಗಿ ಕೇಂದ್ರ ಇಂಧನ ಸಚಿವರು ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ರಾಜ್ಯದಲ್ಲಿ ಗ್ರಾಹಕರಿಗೆ ಎಲ್‌ಇಡಿ ಬಲ್ಬ್‌ಗಳನ್ನು ಸರಬರಾಜು ಮಾಡುವುದನ್ನು ನಿಲ್ಲಿಸಲಾಗಿದ್ದು ಕೇಂದ್ರ ಸರ್ಕಾರ ರಾಜ್ಯಕ್ಕೆ ಪೂರೈಕೆ ಮಾಡಬೇಕಾದ ಎಲ್‌ಇಡಿ ಬಲ್ಬ್‌ಗಳನ್ನು

ಸರಬರಾಜು ಮಾಡಿದಲ್ಲಿ ಕೂಡಲೇ ಗ್ರಾಹಕರಿಗೆ ಎಲ್‌ಇಡಿ ಬಲ್ಬ್‌ಗಳನ್ನು ಒದಗಿಸಲಾಗುವುದು ಎಂದು ತಿಳಿಸಿದರು.

ಬ್ರಿಟೀಷ್ ಡೆಪ್ಯೂಟಿ ಹೈ ಕಮೀಷನ್ ಡಾಮನಿಕ್ ಮ್ಯಾಕ್ ಅಲಿಸ್ಟಾರ್ ಅವರು ವಿದ್ಯುತ್ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಹಲವು ಪ್ರಸ್ತಾವನೆಗಳನ್ನು ಮುಂದಿಟ್ಟಿದ್ದಾರೆ. ತಂತ್ರಜ್ಞಾನ, ಆರ್ಥಿಕ ನೆರವು ಸೇರಿದಂತೆ ಹಲವು ರೀತಿಯ ಸಹಕಾರ ನೀಡಲು ಸಿದ್ಧವಿರುವುದಾಗಿ ಅವರು ತಿಳಿಸಿದರು.

ಮೈಸೂರಿನಲ್ಲಿ ಸ್ಮಾರ್ಟ್ ಮೀಟರ್ ಅಳವಡಿಕೆ ಪ್ರಾರಂಭಿಸಿರುವಂತೆ ಮುಂದಿನ ದಿನಗಳಲ್ಲಿ ಬೆಂಗಳೂರು ಹಾಗೂ ಹುಬ್ಬಳ್ಳಿಗಳಿಗೂ ವಿಸ್ತರಿಸಲು ಉದ್ದೇಶಿಸಲಾಗಿದೆ, ಚಾವಣಿ ಮೇಲಿನ ವಿದ್ಯುತ್ ಉತ್ಪಾದನೆ, ವಿದ್ಯುತ್ ವಾಹನಗಳಿಗೆ ಆದ್ಯತೆ ಸೇರಿದಂತೆ ಹಲವು ಪ್ರಸ್ತಾವನೆಯನ್ನು ಬ್ರಿಟೀಷ್ ಡೆಪ್ಯೂಟಿ ಹೈ ಕಮೀಷನರ್ ಇಂದಿನ ಸಭೆಯಲ್ಲಿ ಪ್ರಸ್ತಾಪಿಸಿದರು. ಲಿಖಿತ ಪ್ರಸ್ತಾವನೆ ಸಲ್ಲಿಸುವಂತೆ ಅವರಿಗೆ ತಿಳಿಸಲಾಗಿದೆ ಎಂದು ಹೇಳಿದರು.

ಪತ್ರಿಕಾ ಗೋಷ್ಠಿಯಲ್ಲಿ ಇಂಧನ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಎಸ್‌ಎಂ:ಜೆಡಿ:ಜಿಪಿಆರ್.

## <u>ಮಹಿಳೆಯರಿಗೆ ಡಿಪ್ಲೋಮ ಇನ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್</u>

ಬೆಂಗಳೂರು, ಜುಲೈ 12 (ಕರ್ನಾಟಕ ವಾರ್ತೆ)

ಬೆಂಗಳೂರು ನಗರದ ರಾಜಾಜಿನಗರದ ಇಂಡಸ್ಟ್ರಿಯಲ್ ಎಸ್ಟೇಟ್‌ನಲ್ಲಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ) ಸಂಸ್ಥೆಯಲ್ಲಿ ಎಸ್.ಎಸ್.ಎಲ್.ಸಿ. ಪಾಸಾದ ವಿದ್ಯಾರ್ಥಿನಿಯರಿಗೆ ಡಿಪ್ಲೋಮ ಇನ್ ಎಲೆಕ್ಟ್ರಾನಿಕ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್ ಕೋರ್ಸ್‌ನ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಪ್ರಸ್ತುತ ಸೀಮಿತ ಸೀಟುಗಳು ಮಾತ್ರ ಲಭ್ಯವಿರುವುದರಿಂದ ಆಸಕ್ತ ಅರ್ಹ ಅಭ್ಯರ್ಥಿಗಳಿಗೆ ಪ್ರವೇಶ ಪಡೆಯಬಹುದಾಗಿದೆ. ಮೊದಲು ಬಂದವರಿಗೆ ಆದ್ಯತೆ ಮೇರೆಗೆ ಪ್ರವೇಶ ನೀಡಲಾಗುವುದು (15-07-2017 ರವರೆಗೆ) ಹೆಚ್ಚಿನ ಮಾಹಿತಿಗೆ ಮೊಬೈಲ್

ಸಂಖ್ಯೆ 9844312400/ 9141629566.ನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಜೂನ್ –2017 ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆ ಫಲಿತಾಂಶ

ಬೆಂಗಳೂರು, ಜುಲೈ 12 (ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು ಇವರು ಜೂನ್ – 2017 ರ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಯ ಫಲಿತಾಂಶವನ್ನು 13–7–2017 ರಂದು ಮಧ್ಯಾಹ್ನ 3–00 ಗಂಟೆಯ ನಂತರ ಪ್ರಕಟಿಸಲಿದೆ.

ಫಲಿತಾಂಶವನ್ನು ಅಂತರ್ಜಾಲ ತಾಣ http://sslc.kar.nic.in http://karresults.nic.in ಗಳಲ್ಲಿ ನೋಡಬಹುದಾಗಿದ್ದು, ದಿನಾಂಕ:14–7–2017 ರಂದು ಬೆಳಿಗ್ಗೆ 10–00 ಗಂಟೆಗೆ ಆಯಾ ಪ್ರೌಢಶಾಲೆಗಳಲ್ಲಿ ಪ್ರಕಟಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.